**All India Radio: Bangalore**
**Regional Bulletin In Kannada**
**04.08.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**04.08.2025 / 2.30 p.m.**

ಮುಖ್ಯಾಂಶಗಳು :

- ಒಳಮೀಸಲಾತಿ ಕುರಿತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ವರದಿ ಸಲ್ಲಿಕೆ ; ಸಂಪುಟದಲ್ಲಿ ಚರ್ಚಿಸಿ ನಿರ್ಧಾರ – ಮುಖ್ಯಮಂತ್ರಿ

- ಸಾರಿಗೆ ಮುಷ್ಕರ; ನೌಕರರ ರಜೆ ರದ್ದುಗೊಳಿಸಿ ಸಾರಿಗೆ ಇಲಾಖೆ ಸುತ್ತೋಲೆ

- ನಾಳೆ ನಡೆಯಬೇಕಿದ್ದ ರಾಹುಲ್ ಗಾಂಧಿ ನೇತೃತ್ವದ ಪ್ರತಿಭಟನೆ ಕೊನೆ ಕ್ಷಣದಲ್ಲಿ ಮುಂದೂಡಿಕೆ

- ಬೆಂಗಳೂರಿನಲ್ಲಿ ಐಪಿಎಲ್ ಶೈಲಿಯ ಮಹಿಳಾ ಟಿ೨೦ ಕ್ರಿಕೆಟ್ ಚಾಂಪಿಯನ್ ಶಿಪ್ ಆರಂಭ

><><><><><><><><><><

ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸುವ ಕುರಿತು ಶಿಫಾರಸು ಮಾಡಲು ರಾಜ್ಯ ಸರ್ಕಾರ ರಚಿಸಿರುವ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್ ನಾಗಮೋಹನ್ ದಾಸ್ ನೇತೃತ್ವ ಏಕ ಸದಸ್ಯ ಆಯೋಗವು ಶಿಫಾರಸುಗಳನ್ನು ಒಳಗೊಂಡ ವರದಿಯನ್ನು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದೆ. ರಾಜ್ಯಾದ್ಯಂತ ಮೇ ೫ ರಿಂದ ನಡೆದ ಸಮೀಕ್ಷೆಯಲ್ಲಿ ಸಂಗ್ರಹಿಸಿದ ಮತ್ತು ಸರ್ಕಾರದ ವಿವಿಧ ಇಲಾಖೆ, ನಿಗಮ ಮಂಡಳಿಗಳಿಂದ ಸಂಗ್ರಹಿಸಿದ ದತ್ತಾಂಶವನ್ನು ವಿಶ್ಲೇಷಿಸಿ,

ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನದಂತೆ ಪರಿಶಿಷ್ಟ ಒಳಜಾತಿಗಳನ್ನು ವರ್ಗೀಕರಿಸಿ ಲಭ್ಯವಿರುವ ಮೀಸಲಾತಿಯನ್ನು ಆಯೋಗ ಹಂಚಿಕೆ ಮಾಡಿದೆ. ವರದಿ ಸಮೀಕ್ಷೆಯ ದತ್ತಾಂಶ ಮತ್ತು ಅನುಬಂಧಗಳು ಒಟ್ಟು ಸೇರಿ ಸುಮಾರು ೧ ಸಾವಿರದ ೭೬೫ ಪುಟಗಳು ಮತ್ತು ಆರು ಶಿಫಾರಸುಗಳನ್ನು ಒಳಗೊಂಡ ವರದಿಯನ್ನು ನೀಡಿದೆ. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಆಯೋಗವು ಒಳ ಮೀಸಲಾತಿ ಕುರಿತ ವರದಿ ನೀಡಿದ್ದು, ಗುರುವಾರ ನಡೆಯಲಿರುವ ಸಂಪುಟ ಸಭೆಯಲ್ಲಿ ಮಂಡಿಸಿ, ಚರ್ಚಿಸಲಾಗುವುದು ಎಂದು ಸ್ಪಷ್ಟ ಪಡಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ, ( ೩೦ ಸೆಕೆಂಡುಗಳು)**

><><><><><><><><><

ವೇತನ ಪರಿಷ್ಕರಣೆ ಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ನಾಳೆಯಿಂದ ರಾಜ್ಯಾದ್ಯಾಂತ ಸಾರಿಗೆ ನೌಕರರು ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ಕೊಟ್ಟಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಹಾಗೂ ಒಕ್ಕೂಟದೊಂದಿಗೆ ವಿಧಾನದೌಧದ ಸಮಿತಿ ಕೊಠಡಿಯಲ್ಲಿ ಇಂದು ಸಭೆ ನಡೆಸಿದರು. ಸಭೆಯಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಹಾಗೂ ಇಲಾಖಾ ಅಧಿಕಾರಿಗಳು ಮತ್ತು ಕಾರ್ಮಿಕ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು. ಈ ನಡುವೆ ಇಂದಿನಿಂದಲೇ ಅನ್ವಯವಾಗುವಂತೆ ಅನಿರ್ದಿಷ್ಟಾವಧಿವರೆಗೆ ಸಾರಿಗೆ ನೌಕರರ ರಜೆಯನ್ನ ರದ್ದುಗೊಳಿಸಿ ಸಾರಿಗೆ ಇಲಾಖೆ ಸುತ್ತೋಲೆ ಹೊರಡಿಸಿದೆ.ಮುಷ್ಕರದ ಅವಧಿಯಲ್ಲಿ ಯಾವುದೇ ಬಸ್ಸುಗಳ ವ್ಯತ್ಯಯ ಆಗದಂತೆ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

><><><><><><><><><

ರಾಹುಲ್ ಗಾಂಧಿ ನೇತೃತ್ವದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಾಳೆ ನಡೆಯಬೇಕಿದ್ದ 'ಪ್ರಜಾಪ್ರಭುತ್ವ ಉಳಿಸಿ, ಮತದಾನ ಹಕ್ಕು ಉಳಿಸಿ' ಪ್ರತಿಭಟನಾ ಸಮಾವೇಶ ಕೊನೇ ಕ್ಷಣದಲ್ಲಿ ಮುಂದೂಡಿಕೆಯಾಗಿದೆ. ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಶಿಬು ಸೊರೇನ್ ನಿಧನದ ಹಿನ್ನೆಲೆಯಲ್ಲಿ ಸಮಾವೇಶ ಮುಂದೂಡಲಾಗಿದೆ ಎಂದು ರಾಜ್ಯ ಉಸ್ತುವಾರಿ ರಣದೀಪ್

ಸುರ್ಜೇವಾಲ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಉಭಯ ನಾಯಕರು ಇದೇ ೮ ರಂದು ಸಮಾವೇಶ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

><><><><><><><><><

ಕೇಂದ್ರ ಸರಕಾರದ ಪ್ರಧಾನಮಂತ್ರಿ ಸೂರ್ಯಘರ್ ಉಚಿತ ವಿದ್ಯುತ್ ಯೋಜನೆಯು ಮೇಲ್ಛಾವಣಿಯ ಸೌರಫಲಕಗಳನ್ನು ಸ್ಥಾಪಿಸಲು ಸಹಾಯಧನವನ್ನು ಒದಗಿಸುತ್ತದೆ ಮತ್ತು ಮನೆಗಳಿಗೆ ಉಚಿತ ವಿದ್ಯುತ್‌ನ್ನು ನೀಡುತ್ತದೆ. ಪ್ರಧಾನಮಂತ್ರಿ ಸೂರ್ಯಘರ್ ಉಚಿತ ವಿದ್ಯುತ್ ಯೋಜನೆಯು ಫೆಬ್ರವರಿ ೧೩, ೨೦೨೪ ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಚಾಲನೆ ನೀಡಿದರು. ಯೋಜನೆಯು ಛಾವಣಿಯ ಸೌರ ಫಲಕಗಳ ಸ್ಥಾಪನೆಗೆ ಅನುಕೂಲವಾಗುವಂತೆ ೧ ಕೋಟಿ ಮನೆಗಳಿಗೆ ಉಚಿತ ವಿದ್ಯುತ್‌ನ್ನು ಒದಗಿಸುವ ಗುರಿಯನ್ನು ಹೊಂದಿದೆ. ಮೇಲ್ಛಾವಣಿಯ ಸೋಲಾರ್ ಪ್ಯಾನಲ್ ವ್ಯವಸ್ಥೆಯನ್ನು ಸ್ಥಾಪಿಸುವ ವೆಚ್ಚದ ಶೇಕಡಾ ೬೦ರವರೆಗೆ ಸರ್ಕಾರವು ಸಹಾಯ ಧನವನ್ನು ನೀಡುತ್ತದೆ, ಗರಿಷ್ಠ ಮಿತಿ ೭೮ ಸಾವಿರ ಕುಟುಂಬಗಳು ತಿಂಗಳಿಗೆ ೩೦೦ ಯೂನಿಟ್‌ಗಳವರೆಗೆ ಉಚಿತ ವಿದ್ಯುತ್‌ನ್ನು ಪಡೆಯಬಹುದು. ಮೇಲ್ಛಾವಣಿಯ ಸೌರ ಫಲಕಗಳನ್ನು ಹೊಂದಿರುವ ಕುಟುಂಬಗಳು ತಮ್ಮ ವಿದ್ಯುತ್ ಬಿಲ್‌ಗಳಲ್ಲಿ ಗಮನಾರ್ಹವಾದ ಕಡಿತವನ್ನು ಕಾಣಲಿದೆ. ವರ್ಷಕ್ಕೆ ೫ ಸಾವಿರದಿಂದ ೧ ಲಕ್ಷದ ೮೦ ಸಾವಿರ ಉಳಿತಾಯವಾಗುತ್ತದೆ. ಈ ಯೋಜನೆಯು ಶುದ್ಧ ಶಕ್ತಿಯ ಬಳಕೆಯನ್ನು ಉತ್ತೇಜಿಸುತ್ತದೆ, ಪಳೆಯುಳಿಕೆ ಇಂಧನಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುತ್ತದೆ ಮತ್ತು ಹವಾಮಾನ ಬದಲಾವಣೆಯ ವಿರುದ್ಧ ಹೋರಾಡುತ್ತದೆ. ಆಕರ್ಷಕ ಸಬ್ಸಿಡಿ ಮೊತ್ತದ ಸೌಲಭ್ಯವನ್ನು ಒದಗಿಸುತ್ತದೆ. ಈ ಕುರಿತು ಸೂರ್ಯ ಘರ್ ಯೋಜನೆಯ ಫಲಾನುಭವಿ ಮೋಹನ್ ಅವರು ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ : ಮೋಹನ್, ಸೂರ್ಯ ಘರ್ ಯೋಜನೆಯ ಫಲಾನುಭವಿ ( ೨೯ ಸೆಕೆಂಡುಗಳು)**

><><><><><><><><><

ಇದೇ ೧೭ರಂದು ನಡೆಯಲಿರುವ ಕೋಲಾರದ ವೇಮಗಲ್ ಕುರುಗಲ್ ಪಟ್ಟಣ ಪಂಚಾಯತಿಯ ೧೭ ಸ್ಥಾನಗಳ ಅಭ್ಯರ್ಥಿಗಳ ಪಟ್ಟಿಯನ್ನು ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಕೂಟ ಪ್ರಕಟಿಸಿದೆ. ೧೭

ಸ್ಥಾನಗಳ ಪೈಕಿ ೯ ಬಿಜೆಪಿ ಮತ್ತು ೮ ಕ್ಷೇತ್ರಗಳಲ್ಲಿ ಜೆಡಿಎಸ್ ಅಭ್ಯರ್ಥಿಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಕಾಂಗ್ರೆಸ್ ೧೨ ಸ್ಥಾನಗಳಿಗೆ ತನ್ನ ಅಭ್ಯರ್ಥಿಗಳ ಮೊದಲ ಪಟ್ಟಿ ಪ್ರಕಟಿಸಿದೆ. ಉಳಿದ ಆರು ಕಡೆಗಳಲ್ಲಿ ಅಭ್ಯರ್ಥಿಗಳನ್ನು ಪ್ರಕಟಿಸಿಲ್ಲ.

><><><><><><><><><

ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ಕಾಲ ಕಾಲಕ್ಕೆ ರೂಪಿಸುವ ನಿಯಮಗಳನ್ನು ಆಹಾರ ತಯಾರಕರು ಮತ್ತು ಮಾರಾಟಗಾರರು ಕಡ್ಡಾಯವಾಗಿ ಪಾಲಿಸಬೇಕೆಂದು ದಾವಣಗೆರೆ ಜಿಲ್ಲಾ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಔಷಧ ನಿಯಂತ್ರಣ ಇಲಾಖೆ ಅಧಿಕಾರಿ ಡಾ.ಜೆ.ಎಸ್.ನಾಗರಾಜ್ ಹೇಳಿದರು. ದಾವಣಗೆರೆಯಲ್ಲಿಂದು ಹೋಟೆಲ್ ಉದ್ದಿಮೆದಾರರು ಮತ್ತು ಬೀದಿ ಬದಿ ವ್ಯಾಪಾರಿಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಉತ್ತಮ ಗುಣಮಟ್ಟದ ವಸ್ತುಗಳನ್ನು ಬಳಸಿ ಆಹಾರ ತಯಾರಿಸಬೇಕು, ಹೀಗೆ ತಯಾರಿಸಿದ ಆಹಾರ ಪದಾರ್ಥಗಳನ್ನು ಸರಿಯಾದ ಕ್ರಮದಲ್ಲಿ ಸಂಗ್ರಹಿಸುವುದು ಮತ್ತು ಮಾರಾಟ ಮಾಡುವುದರಲ್ಲಿ ಲೋಪಗಳು ಕಂಡು ಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

><><><><><><><><><

ಮಡಿಕೇರಿಯ ಕೊಡಗು ಮೆಡಿಕಲ್ ಕಾಲೇಜು ಆಸ್ಪತ್ರೆಯನ್ನು ಮತ್ತಷ್ಟು ಮೇಲ್ದರ್ಜೆಗೆ ಏರಿಸಲಾಗುವುದು. ಕೊಡಗಿನ ಜನರ ಬಹುಕಾಲದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಬೇಡಿಕೆಯನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಸರಕಾರದಿಂದ ಅಗತ್ಯ ಅನುದಾನ ತರಲಾಗುವುದು ಎಂದು ಕೊಡಗು ಶಾಸಕ ಡಾ.ಮಂತರ್ ಗೌಡ ಹೇಳಿದರು. ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ನೂತನ ದಂತ ಚಿಕಿತ್ಸಾ ವಿಭಾಗ ಹಾಗೂ ಓಪಿಜಿ ಎಕ್ಸ್ ರೇ ಮೆಷಿನ್ ಉದ್ಘಾಟಿಸಿ ಮಾತನಾಡಿದ ಅವರು, ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಸೇವೆಯನ್ನು ಕರ್ತವ್ಯ ಎಂದು ಪರಿಗಣಿಸಿ ರೋಗಿಗಳನ್ನು ಗಮನಿಸಬೇಕು. ಬಹುತೇಕ ಎಲ್ಲಾ ರೀತಿಯ ಉನ್ನತ ಚಿಕಿತ್ಸೆಗಳು ಕೊಡಗು ಮೆಡಿಕಲ್ ಕಾಲೇಜ್ ಆಸ್ಪತ್ರೆಯಲ್ಲಿ ಲಭ್ಯವಿದ್ದು, ಜನರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

><><><><><><><><><

ಬೆಂಗಳೂರಿನಲ್ಲಿ ಇಂದು ಮೊದಲ ಐಪಿಎಲ್ ಶೈಲಿಯ ಮಹಿಳಾ ಟಿ೨೦ ಕ್ರಿಕೆಟ್ ಚಾಂಪಿಯನ್‌ಶಿಪ್ ಆರಂಭವಾಗಿದೆ. ಇದೇ ೧೦ ರವರೆಗೆ ಆಲೂರು ಕೆಎಸ್‌ಸಿಎ ಕ್ರೀಡಾಂಗಣದಲ್ಲಿ ನಡೆಯಲಿರುವ ಟಿ೨೦ ಮಹಾರಾಣಿ ಟ್ರೋಫಿಗಾಗಿ ಮೈಸೂರು ವಾರಿಯರ್ಸ್, ಹುಬ್ಬಳ್ಳಿ ಟೈಗರ್ಸ್, ಕಲ್ಯಾಣಿ ಬೆಂಗಳೂರು ಬ್ಲಾಸ್ಟರ್ಸ್, ಮಂಗಳೂರು ಡ್ರ್ಯಾಗನ್ಸ್ ಮತ್ತು ಶಿವಮೊಗ್ಗ ಲಯನೆಸ್ ತಂಡಗಳು ಪೈಪೋಟಿ ನಡೆಸಲಿವೆ. ಇಂದು ಬೆಳಿಗ್ಗೆ ನಡೆದ ಮೊದಲ ಪೂರ್ವ ಪಂದ್ಯದಲ್ಲಿ ಶಿವಮೊಗ್ಗ ಲಯನೆಸ್ ತಂಡವು ಹುಬ್ಬಳ್ಳಿ ಟೈಗರ್ಸ್ ತಂಡವನ್ನು ೧೫ ರನ್‌ಗಳಿಂದ ಸೋಲಿಸಿತು. ಆರು ವಿಕೆಟ್‌ಗಳ ನಷ್ಟಕ್ಕೆ ೧೨೬ ರನ್‌ಗಳಿಸಿದ್ದ ಶಿವಮೊಗ್ಗ ಲಯನೆಸ್ ವಿರುದ್ಧ ಹುಬ್ಬಳ್ಳಿ ಟೈಗರ್ಸ್ ಐದು ವಿಕೆಟ್‌ಗಳ ನಷ್ಟಕ್ಕೆ ೧೧೧ ರನ್‌ಗಳನ್ನು ಮಾತ್ರ ಗಳಿಸಲು ಸಾಧ್ಯವಾಯಿತು. ಮುಂದಿನ ಪಂದ್ಯವು ಮಂಗಳೂರು ಡ್ರ್ಯಾಗನ್ಸ್ ಮತ್ತು ಬೆಂಗಳೂರು ಬ್ಲಾಸ್ಟರ್ಸ್ ನಡುವೆ ಆರಂಭವಾಗಿದೆ.

><><><><><><><><><><

ಇದೇ ೯ರಂದು ನುಲಿಯ ಚಂದಯ್ಯ ಜಯಂತಿ ಹಾಗೂ ಇದೇ ೧೬ರಂದು ಶ್ರೀಕೃಷ್ಣ ಜನ್ಮ ದಿನದ ಕಾರ್ಯಕ್ರಮಗಳನ್ನು ಅತ್ಯಂತ ಅರ್ಥಪೂರ್ಣ ಹಾಗೂ ವ್ಯವಸ್ಥಿತವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ವಿಜಯಪುರ ಜಿಲ್ಲಾ ಉಪವಿಭಾಗಾಧಿಕಾರಿ ಗುರುನಾಥ ದಡ್ಡೆ ತಿಳಿಸಿದರು.

><><><><><><><><><><